**1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಿಕ್ಕಮಗಳೂರು**

**ಸತ್ರ ಮೊಕದ್ದಮೆ ನಂಃ 75/2023**

ಸಾಕ್ಷಿದಾರರ ಹೆಸರು - ಶಾಂತಪ್ಪ ಪಿಡಬ್ಲೂ -08
ತಂದೆಯ ಹೆಸರು - ಹನುಮಂತಪ್ಪ ಸಿಡಬ್ಲೂ -22
ವಯಸ್ಸು - 52 ವರ್ಷ
ಉದ್ಯೋಗ - ಎ.ಎಸ್.ಐ., ಕೊಪ್ಪ ಪೊಲೀಸ್ ಠಾಣೆ
ವಾಸ ಸ್ಥಳ - ಕೊಪ್ಪ

*(ಆರೋಪಿಯು ನ್ಯಾಯಾಂಗ ಬಂಧನದಲ್ಲಿದ್ದು, ಆತನನ್ನು ಈ ದಿನ **Google meet** ನಲ್ಲಿ ವೀಡಿಯೋ ಕಾನ್ಫರೆನ್ಸಿಂಗ್ ಮುಖಾಂತರ ಕಾರಾಗೃಹದಿಂದ ಹಾಜರುಪಡಿಸಲಾಗಿರುತ್ತದೆ. ಸಾಕ್ಷಿಯ ವಿಚಾರಣೆಯನ್ನು ದಾಖಲಿಸುವ ಮೊದಲು ಆರೋಪಿಗೆ ಸಾಕ್ಷಿ ಮಾತನಾಡುವುದು ಸರಿಯಾಗಿ ಕೇಳಿಸುತ್ತಿದೆ ಮತ್ತು ವಿಡಿಯೋ ಕಾನ್ಫರೆನ್ಸಿಂಗ್ ಮುಖಾಂತರ ಸಾಕ್ಷಿಯ ವಿಚಾರಣೆಯನ್ನು ದಾಖಲಿಸಲು ಯಾವುದೇ ತಾಂತ್ರಿಕ ಸಮಸ್ಯೆ ಇಲ್ಲವೆಂದು ಖಾತ್ರಿಪಡಿಸಿಕೊಳ್ಳಲಾಯಿತು.)*

ದಿನಾಂಕಃ 24-01-2026 ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.

<u>ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ</u>

1. 2019 ನೇ ಇಸವಿ ಮಾರ್ಚ್ ತಿಂಗಳಿನಿಂದ 2023 ನೇ ಇಸವಿ ನವೆಂಬರ್ ತಿಂಗಳಿನವರೆಗೆ ಬಾಳೆಹೊನ್ನೂರು ಪೊಲೀಸ್ ಠಾಣೆಯಲ್ಲಿ ಸಹಾಯಕ ಆರಕ್ಷಕ ಉಪನಿರೀಕ್ಷಕನಾಗಿ ಕಾರ್ಯ

ನಿರ್ವಹಿಸಿದ್ದೇನೆ.

2. ನಮ್ಮ ಠಾಣೆಯ ಮುಖ್ಯ ಪೇದೆಯಾಗಿದ್ದ ಚಾಸಾ.21 ನಾಗರಾಜ್ ರವರು ದಿನಾಂಕಃ 10-03-2023 ರಂದು ಬಾಳೆಹೊನ್ನೂರು ಸರ್ಕಾರಿ ಆಸ್ಪತ್ರೆಯಲ್ಲಿ ಮದುಗುಣಿ ಗ್ರಾಮದ ಸೀಕೆ ವಾಸಿಯಾದ ಜಯ ಕೋಂ ರವಿರವರ ಹೇಳಿಕೆಯನ್ನು ಸಂಜೆ 5.30 ಗಂಟೆಯಿಂದ 6.30 ಗಂಟೆಯವರೆಗೆ ಪಡೆದು ಅದೇ ದಿನ ಅಂದರೆ ದಿಃ 10-03-2023 ರಂದು ನಾನು ಠಾಣಾಧಿಕಾರಿಯಾಗಿ ಕರ್ತವ್ಯದಲ್ಲಿದ್ದ ಸಮಯದಲ್ಲಿ ಸಂಜೆ 6.45 ಗಂಟೆಗೆ ನನ್ನ ಮುಂದೆ ಹಾಜರುಪಡಿಸಿದರು. ಸದರಿ ದೂರನ್ನು ಸ್ವೀಕರಿಸಿ ಠಾಣಾ ಮೊಕದ್ದಮೆ ಸಂಖ್ಯೆ 30/2023 ರಂತೆ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಸದರಿ ದೂರನ್ನು ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ.1 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.1(ಬಿ) ಎಂದು ಗುರುತಿಸಲಾಯಿತು.

3. ನಾನು ದಾಖಲು ಮಾಡಿದ್ದ ಪ್ರಥಮ ವರ್ತಮಾನ ವರದಿಯನ್ನು ನೋಡಿದರೆ ಗುರುತಿಸುತ್ತೇನೆ. ಪ್ರಥಮ ವರ್ತಮಾನ ವರದಿಯನ್ನು ಮತ್ತು ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿದ ಮೇರೆಗೆ ಸದರಿ ಪ್ರಥಮ ವರ್ತಮಾನ ವರದಿಯನ್ನು ನಿಪಿ.38 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.38(ಎ) ಎಂದು ಗುರುತಿಸಲಾಯಿತು.

4. ನಂತರ ನಾನು ಮಾಹಿತಿಯನ್ನು ಬಾಳೆಹೊನ್ನೂರು ಪೊಲೀಸ್ ಠಾಣೆಯ ಪಿ.ಎಸ್.ಐ ಆದ ಬಸವರಾಜುರವರಿಗೆ ತಿಳಿಸಿ ಅವರ ಮೌಖಿಕ ಆದೇಶದ ಮೇರೆಗೆ ಚಾಸಾ.15 ಸುನಿಲ್ ಕುಮಾರ ಮತ್ತು ಚಾಸಾ.16 ಯಕೂಬ್ ತಂಬೋಡಿರವರನ್ನು ಆರೋಪಿಯ ಪತ್ತೆಗಾಗಿ ನೇಮಿಸಿದ್ದೆನು. ಅದರಂತೆ ಚಾಸಾ.15 ಮತ್ತು 16 ರವರು ಅದೇ ದಿನ ಆರೋಪಿಯನ್ನು ಸೀಕೆ ಬಸ್ ನಿಲ್ದಾಣದಲ್ಲಿ ಸಂಜೆ 7.05 ಗಂಟೆಗೆ ವಶಕ್ಕೆ ಪಡೆದು ಸಂಜೆ 7.35 ಗಂಟೆಗೆ ನನ್ನ ಮುಂದೆ ಹಾಜರುಪಡಿಸಿ ಆ ಬಗ್ಗೆ ವರದಿ ನೀಡಿದರು. ಸದರಿ ವರದಿಯನ್ನು ಮತ್ತು ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ಗುರುತಿಸಿದ ಮೇರೆಗೆ ಸದರಿ ವರದಿಯನ್ನು ನಿಪಿ.39 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.39(ಎ) ಎಂದು ಗುರುತಿಸಲಾಯಿತು. ನಂತರ ನಾನು ದಸ್ತಗಿರಿ ಕ್ರಮ ಅನುಸರಿಸಿ ಆರೋಪಿಯನ್ನು ಬಂಧಿಸಿದ್ದೇನೆ. ನಂತರ ಆರೋಪಿಯನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿ ರಿಮ್ಯಾಂಡ್ ಅರ್ಜಿಯೊಂದಿಗೆ ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ.

5. ಅದೇ ದಿನ ರಾತ್ರಿ ಮಂಗಳೂರು ವೆನಲಾಕ್ ಆಸ್ಪತ್ರೆಯಿಂದ ನಮ್ಮ ಠಾಣಾ ಇ-ಮೇಲ್ ಗೆ ಮಾಹಿತಿ ಬಂದಿತ್ತು, ಅದರಲ್ಲಿ ಸದರಿ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಾಗಿದ್ದ ರವಿ ಬಿನ್ ನೀಲಯ್ಯ ಪೂಜಾರಿ ರವರು ದಿಃ 10-03-2023 ರಂದು ರಾತ್ರಿ 9.24 ಗಂಟೆಗೆ ಮೃತಪಟ್ಟಿದ್ದಾಗಿ ತಿಳಿಸಲಾಗಿತ್ತು. ನಂತರ ಅದೇ ದಿನ ನಾನು ಎನ್.ಆರ್.ಪುರ ಜೆ.ಎಂ.ಎಫ್.ಸಿ ನ್ಯಾಯಾಲಯಕ್ಕೆ ಮನವಿಯನ್ನು ಸಲ್ಲಿಸಿ ಗಾಯಾಳು ಚಿಕಿತ್ಸೆ ಫಲಕಾರಿಯಾಗದೇ

ಮೃತಪಟ್ಟಿದ್ದರಿಂದ ಐ.ಪಿ.ಸಿ. ಕಲಂ 504, 324 ಮತ್ತು 307 ನ್ನು ಕೈಬಿಟ್ಟು ಆರೋಪಿಯ ವಿರುದ್ಧ ಐ.ಪಿ.ಸಿ. ಕಲಂ 302 ನ್ನು ಅಳವಡಿಸಿಕೊಂಡು ತನಿಖೆ ಮುಂದುವರೆಸಲು ಅನುಮತಿ ಕೋರಿದ್ದೆನು. ಸದರಿ ಮನವಿಯನ್ನು ಮತ್ತು ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ಗುರುತಿಸಿದ ಮೇರೆಗೆ ಸದರಿ ಮನವಿಯನ್ನು ನಿಪಿ.40 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.40(ಎ) ಎಂದು ಗುರುತಿಸಲಾಯಿತು. ನಂತರ ಪ್ರಕರಣವು ಘೋರ ಅಪರಾದವನ್ನು ಒಳಗೊಂಡಿದ್ದರಿಂದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ.25 ರವರಿಗೆ ನೀಡಿದ್ದೆನು.

6. ಈ ದಿನ ವಿಡಿಯೋ ಕಾನ್ಫರೇನ್ಸಿಂಗ್ ಮುಖಾಂತರ ಹಾಜರುಪಡಿಸಿದ ಆರೋಪಿಯನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ.

<u>ಪಾಟೀ ಸವಾಲುಃ ಆರೋಪಿಯ ಪರವಾಗಿ ಶ್ರೀ ಹೆಚ್.ಎಂ.ಎಸ್ ವಕೀಲರಿಂದಃ</u>

(ಈ ಹಂತದಲ್ಲಿ ವಿಡಿಯೋ ಕಾನ್ಫರೇನ್ಸಿಂಗ್ ಮುಖಾಂತರ ಹಾಜರುಪಡಿಸಿರುವ ಆರೋಪಿಯನ್ನು ಕುರಿತು ಧ್ವನಿ ಕೇಳಿಸುತ್ತಿದೆಯೇ ಎಂದು ಕೇಳಿ, ಕೇಳಿಸುತ್ತಿದೆ ಎಂದು ಖಾತ್ರಿಪಡಿಸಿಕೊಳ್ಳಲಾಯಿತು).

7. ನಾನು ಠಾಣೆಯಲ್ಲಿದ್ದ ಸಮಯದಲ್ಲಿ ಫಾಸಾ.1 ರವರು ಠಾಣೆಗೆ ಬಂದಿರಲಿಲ್ಲ. ನೀವು ದಾಖಲಿಸಿದ ಪ್ರಥಮ ವರ್ತಮಾನ ವರದಿಯನ್ನು ಫಾಸಾ.1 ರವರಿಗೆ ಕೊಟ್ಟಿಲ್ಲ ಎಂದರೆ ಸಾಕ್ಷಿ ಆ ದಿನ

ಕೊಟ್ಟಿಲ್ಲ ಆದರೆ ನಂತರದಲ್ಲಿ ಕೊಟ್ಟಿದ್ದೇನೆ ಎನ್ನುತ್ತಾರೆ. ಯಾವ ದಿನಾಂಕದಂದು ಕೊಟ್ಟಿದ್ದೀರಿ ಎಂದರೆ ಸಾಕ್ಷಿ ಒಂದು ವಾರದ ನಂತರ ಎನ್ನುತ್ತಾರೆ. ನಾನು ಪ್ರಕರಣವನ್ನು ದಾಖಲು ಮಾಡಿದ ದಿನದಂದು ಪಿ.ಎಸ್.ಐ. ರವರು ಠಾಣೆಯಲ್ಲಿ ಇರಲಿಲ್ಲ ಹಾಗಾಗಿ ನಾನೇ ಠಾಣಾಧಿಕಾರಿಯಾಗಿದ್ದೆನು.

8. ಬಾಳೆಹೊನ್ನೂರು ಸರ್ಕಾರಿ ಆಸ್ಪತ್ರೆಯಿಂದ ಎಂ.ಎಲ್.ಸಿ. ಮಾಹಿತಿ ಬಂದಿತ್ತೇ ಎಂದರೆ ಸಾಕ್ಷಿ ಹೌದು ಎನ್ನುತ್ತಾರೆ. ಎಷ್ಟು ಗಂಟೆಗೆ ಬಂದಿತ್ತು ಎಂದರೆ ಸಾಕ್ಷಿ ಸಂಜೆ 5 ಗಂಟೆಗೆ ಸದರಿ ಆಸ್ಪತ್ರೆಯಿಂದ ಫೋನ್ ಮಾಡಿ ತಿಳಿಸಲಾಗಿತ್ತು ಎನ್ನುತ್ತಾರೆ. ಸದರಿ ಮಾಹಿತಿಯನ್ನು ನಾನೇ ಸ್ವೀಕರಿಸಿದ್ದೇನೆ. ನಂತರ ನಾನು ಚಾಸಾ.21 ಹೆಚ್.276 ನಾಗರಾಜ್ ರವರನ್ನು ಸದರಿ ಆಸ್ಪತ್ರೆಗೆ ಭೇಟಿ ನೀಡಿ ಹೇಳಿಕೆಯನ್ನು ದಾಖಲಿಸುವಂತೆ ಸೂಚಿಸಿ ಕಳುಹಿಸಿದ್ದೆನು. ಅದರಂತೆ ಅವರು ಸದರಿ ಆಸ್ಪತ್ರೆಗೆ ಭೇಟಿ ನೀಡಿ ಅಲ್ಲಿನ ವೈದ್ಯಾಧಿಕಾರಿಗಳು ನೀಡಿದ ಎಂ.ಎಲ್.ಸಿ ಮಾಹಿತಿಯನ್ನು ಪಡೆದು ಫ್ರಾಸಾ.1 ರವರ ಹೇಳಿಕೆಯನ್ನು ಪಡೆದುಕೊಂಡು ಬಂದು ನನ್ನ ಮುಂದೆ ಹಾಜರುಪಡಿಸಿದ್ದರು. ಆ ದಿನ ಚಾಸಾ.21 ರವರನ್ನು ಆಸ್ಪತ್ರೆಗೆ ಕಳುಹಿಸುವ ಪೂರ್ವದಲ್ಲಿ ಅವರು ಠಾಣೆಯಲ್ಲಿದ್ದರು. ನೀವು ಹೇಳಿದಂತೆ ಚಾಸಾ.21 ರವರನ್ನು ಹೇಳಿಕೆ ಪಡೆಯಲು ಕಳುಹಿಸಿದ ಬಗ್ಗೆ ಠಾಣಾ ದಿನಚರಿಯಲ್ಲಿ ನಮೂದು ಮಾಡಿದ್ದೀರಾ ಎಂದರೆ ಸಾಕ್ಷಿ ಹೌದು ಎನ್ನುತ್ತಾರೆ. ಚಾಸಾ.21 ರವರು ಹೇಳಿಕೆಯನ್ನು ಪಡೆದು ಠಾಣೆಗೆ ಹಾಜರಾಗುವ ಪೂರ್ವದಲ್ಲಿ ನಿಮ್ಮ ಠಾಣೆಯ ಪಿ.ಎಸ್.ಐ. ರವರು ಠಾಣೆಗೆ ಬಂದು ಹೋಗಿದ್ದರೇ ಎಂದರೆ ಸಾಕ್ಷಿ ಹೌದು

ಎನ್ನುತ್ತಾರೆ.

9. ನೀವು ಆರೋಪಿಯ ಪತ್ತೆಗಾಗಿ ಸಿಬ್ಬಂದಿಯನ್ನು ನೇಮಿಸಿ ಕಳುಹಿಸಲಾಗಿತ್ತು ಎಂದು ಹೇಳಿದ್ದೀರಿ ಆಗ ಸಮಯ ಎಷ್ಟಾಗಿತ್ತು ಎಂದರೆ ಸಾಕ್ಷಿ ಸಂಜೆ 6.50 ಎನ್ನುತ್ತಾರೆ. ಕೃತ್ಯ ನಡೆದಿದೆ ಎನ್ನಲಾದ ಸ್ಥಳದಿಂದ ಬಾಳೆಹೊನ್ನೂರು ಪೊಲೀಸ್ ಠಾಣೆಗೆ 4 ರಿಂದ 5 ಕಿ.ಮೀ ದೂರವಾಗಬಹುದು. ಬಾಳೆಹೊನ್ನೂರು ಸರ್ಕಾರಿ ಆಸ್ಪತ್ರೆಯಿಂದ ನಮ್ಮ ಠಾಣೆ 200 ಮೀಟರ್ ದೂರದಲ್ಲಿದೆ. ಆರೋಪಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದಾಗ ಸಮಯ ಎಷ್ಟಾಗಿತ್ತು ಎಂದರೆ ಸಾಕ್ಷಿ ಆರೋಪಿಯನ್ನು ಸಿಬ್ಬಂದಿಯೊಂದಿಗೆ ರಾತ್ರಿ 8.30 ಗಂಟೆಗೆ ಕಳುಹಿಸಿದ್ದೇನೆ ಎನ್ನುತ್ತಾರೆ.

10. ನಿಪಿ.40 ರಂತೆ ನ್ಯಾಯಾಲಯಕ್ಕೆ ಮನವಿ ಸಲ್ಲಿಸಿದ ಬಗ್ಗೆ ಠಾಣಾ ದಿನಚರಿಯಲ್ಲಿ ನಮೂದು ಮಾಡಿದ್ದೇನೆ. ನ್ಯಾಯಾಲಯಕ್ಕೆ ಸದರಿ ಮನವಿಯನ್ನು ಎಷ್ಟು ಗಂಟೆಗೆ ಕಳುಹಿಸಲಾಗಿತ್ತು ಎಂದು ದಿನಚರಿಯಲ್ಲಿ ನಮೂದು ಮಾಡಿದ್ದೀರಿ ಎಂದರೆ ಸಾಕ್ಷಿ ದಿನಚರಿಯನ್ನು ನೋಡಿ ಹೇಳಬೇಕಾಗುತ್ತದೆ ಎನ್ನುತ್ತಾರೆ.

11. ವೆನಲಾಕ್ ಆಸ್ಪತ್ರೆಯಿಂದ ಇ-ಮೇಲ್ ಮುಖಾಂತರ ಬಂದ ಮಾಹಿತಿಯನ್ನು ನಾನು ನಮ್ಮ ಮೇಲಾಧಿಕಾರಿಗಳಿಗೆ ತಿಳಿಸಿದ್ದೇನೆ. ಆಗ ಸಮಯ ಎಷ್ಟಾಗಿತ್ತು ಎಂದರೆ ಸಾಕ್ಷಿ ರಾತ್ರಿ 9.30 ಗಂಟೆ ಎನ್ನುತ್ತಾರೆ. ನಾನು ಪ್ರಥಮ ವರ್ತಮಾನ ವರದಿಯನ್ನು ದಾಖಲಿಸಿದ ಬಳಿಕ ಕಡತ ನನ್ನ ಬಳಿಯೇ ಇತ್ತು. ನೀವು

ಪ್ರಕರಣವನ್ನು ದಾಖಲಿಸಿದ ಬಳಿಕ ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿದ್ದೀರಾ ಎಂದರೆ ಸಾಕ್ಷಿ ಇಲ್ಲ ಎನ್ನುತ್ತಾರೆ.

12. ಆರೋಪಿಯನ್ನು ಸೀಕೆ ಬಸ್ ನಿಲ್ದಾಣದಲ್ಲಿ ಸಿಬ್ಬಂದಿ ವಶಕ್ಕೆ ಪಡೆದಿದ್ದಾಗಿ ಹೇಳಿದ್ದೀರಿ ಅಲ್ಲಿಂದ ಕೃತ್ಯ ನಡೆದ ಸ್ಥಳಕ್ಕೆ ಎಷ್ಟು ದೂರ ಆಗುತ್ತದೆ ಎಂದರೆ ಸಾಕ್ಷಿ ನಾನು ಅಲ್ಲಿಗೆ ಹೋಗಿಲ್ಲ ಎನ್ನುತ್ತಾರೆ. ಆರೋಪಿಯನ್ನು ನೀವು ಹೇಳಿದ ಸ್ಥಳದಲ್ಲಿ ವಶಕ್ಕೆ ಪಡೆದ ಬಗ್ಗೆ ಸಿಬ್ಬಂದಿಗಳು ಸ್ಥಳದಲ್ಲಿ ಬರವಣಿಗೆ ಮಾಡಿ ಸ್ಥಳೀಯರ ಸಹಿ ಪಡೆದು ನಿಮ್ಮ ಮುಂದೆ ಹಾಜರುಪಡಿಸಿದರೇ ಎಂದರೆ ಸಾಕ್ಷಿ ಇಲ್ಲ ಎನ್ನುತ್ತಾರೆ. ನಾನು ಆರೋಪಿಯ ಸ್ವಇಚ್ಛಾ ಹೇಳಿಕೆಯನ್ನು ಪಡೆದಿಲ್ಲ.

13. ದಿಃ 11-03-2023 ರಂದು ಬೆಳಿಗ್ಗೆ ಪ್ರಕರಣದ ಕಡತವನ್ನು ಚಾಸಾ.25 ರವರಿಗೆ ಕೊಟ್ಟಿದ್ದೇನೆ. ನೀವು ಠಾಣಾಧಿಕಾರಿಯಾಗಿದ್ದ ಸಮಯದಲ್ಲಿ ಚಾಸಾ.21 ರವರು ಬಾಳೆಹೊನ್ನೂರು ಸರ್ಕಾರಿ ಆಸ್ಪತ್ರೆಯಲ್ಲಿ ಫ್ರಾಸಾ.1 ರವರ ಹೇಳಿಕೆಯನ್ನು ನಿಪಿ.1 ರಂತೆ ಪಡೆದು ನಿಮ್ಮ ಮುಂದೆ ಹಾಜರುಪಡಿಸಿದ್ದಾಗಿ ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ಆರೋಪಿಯನ್ನು ವಶಕ್ಕೆ ಪಡೆಯಲು ಚಾಸಾ.15 ಮತ್ತು 16 ರವರನ್ನು ನೇಮಿಸಿ ಕಳುಹಿಸಿದ್ದಾಗಿ ಅದರಂತೆ ಅವರು ಆರೋಪಿಯನ್ನು ದಿಃ 10-03-2023 ರಂದು ಸಂಜೆ 7.05 ಗಂಟೆಗೆ ಸೀಕೆ ಬಸ್ ನಿಲ್ದಾಣದಲ್ಲಿ ವಶಕ್ಕೆ ಪಡೆದು ಸಂಜೆ 7.35 ಗಂಟೆಗೆ ನಿಮ್ಮ ಮುಂದೆ ಹಾಜರುಪಡಿಸಿ ನಿಪಿ.39 ರಂತೆ ವರದಿ ನೀಡಿದ್ದಾಗಿ ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ವೆನಲಾಕ್ ಆಸ್ಪತ್ರೆಯಿಂದ ಇ-ಮೇಲ್ ಮುಖಾಂತರ

ಮಾಹಿತಿ ಬಂದಿದ್ದಾಗಿ, ನಂತರ ನೀವು ನ್ಯಾಯಾಲಯಕ್ಕೆ ನಿಪಿ.40 ರಂತೆ ಮನವಿಯನ್ನು ಸಲ್ಲಿಸಿದ್ದಾಗಿ ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ನೀವು ಹೇಳಿದಂತೆ ಯಾವುದೇ ಕರ್ತವ್ಯವನ್ನು ನಿರ್ವಹಿಸದೇ ಇದ್ದರೂ ಸಹ ನಿಮ್ಮ ಮೇಲಾಧಿಕಾರಿಗಳ ಮಾತನ್ನು ಕೇಳಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು )

ಓ.ಹೇ.ಕೇ.ಸ.ಇ.ಎ.ಒ.

ಸಹಿ/-

(ಭಾನುಮತಿ ಬಿ.ಸಿ)

1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

ಸಾಕ್ಷಿಯ ಸಹಿ